ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಶುಕ್ರವಾರ, ದಿನಾಂಕ: 25ನೇ ಸೆಪ್ಟಂಬರ್, 2020

ಗ್ರಾಮ ಪಂಚಾಯಿತಿಗಳ ಸಮಸ್ಯೆಗಳ ಬಗ್ಗೆ

ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

709 (761) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗ್ರಾಮ ಪಂಚಾಯತಿಗಳ ಅಧಿಕಾರದ ಅವಧಿ ಮುಕ್ತಾಯವಾಗಿರುವ ಹಿನ್ನಲೆಯಲ್ಲಿ ಗ್ರಾಮಗಳ ಜನರ ಸಮಸ್ಯೆಗಳನ್ನು ಬಗೆಹರಿಸುವಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಬೀದರ್ ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆಯೇ ; ಯಾವ ಯಾವ ಗ್ರಾಮ ಪಂಚಾಯತಿಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ;

(ಇ) ಗ್ರಾಮ ಪಂಚಾಯತಿಗಳಲ್ಲಿ ಆಡಳಿತಾಧಿಕಾರಿಗಳ ಪಾತ್ರವೇನು ; ಅವರಿಗೆ ವಹಿಸಿರುವ ಕಾರ್ಯನಿರ್ವಹಣೆ ಯಾವುದು ;

(ಈ) ಗ್ರಾಮ ಪಂಚಾಯತಿಗಳಿಗೆ ನಿಗಧಿತ ಅವಧಿಯೊಳಗೆ ಚುನಾವಣೆ ನಡೆಸಲಾಗುವುದೇ ; ಈ ದಿಶೆಯಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು ?